# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 175 | Pages. 2 | Date: 18-05-2025, SUNDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 175 - ಪುಟಗಳು : 2 - 18 ಮೇ 2025 ಭಾನುವಾರ Ph: 8762954248 ದರ : ₹1


## ಹುಣಸಿನಕೆರೆ ಸರ್ವೆಗೆ ಉಪ ಲೋಕಾಯುಕ್ತರ ಸೂಚನೆ

### 7 ಸ್ವಯಂ ಪ್ರೇರಿತ ದೂರು ದಾಖಲು : ಅಧಿಕಾರಿಗಳಿಗೆ ಗಡುವು ನಿಗದಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಹುಣಸಿನಕೆರೆ ತನ್ನ ಸ್ವರೂಪವನ್ನೇ ಕಳೆದುಕೊಂಡಿದೆ. ನಗರದ ತ್ಯಾಜ್ಯವೆಲ್ಲ ಒಳಚರಂಡಿ ಮೂಲಕ ಕೆರೆಗೆ ಸೇರುತ್ತಿರುವುದರಿಂದ ಭಾರೀ ಸಮಸ್ಯೆಯಾಗಿದೆ. ಕೆರೆ ಜಾಗ ಒತ್ತುವರಿಯಾಗಿರುವ ಸಂಶಯವಿದ್ದು ಸರ್ವೆಗೆ ಸೂಚಿಸಲಾಗಿದೆ ಎಂದು ಉಪ ಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 127 ಎಕರೆ ಕೆರೆ ಪ್ರದೇಶ ಒತ್ತುವರಿಯಾಗಿರುವ ಸಂಶಯ ಮೇಲ್ನೋಟಕ್ಕೆ ಕಂಡುಬಂದಿದೆ. ಸರ್ವೆ ನಡೆಸಿ ನಿಖರ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಹೇಳಿದರು.

ಮೂರು ದಿನಗಳ ಜಿಲ್ಲಾ ಪ್ರವಾಸದಲ್ಲಿ ಹಲವು ಸಮಸ್ಯೆಗಳು ಗಮನಕ್ಕೆ ಬಂದಿವೆ. ತಾಲ್ಲೂಕಿನ ಅಗಿಲೆ ಸಮೀಪ ತ್ಯಾಜ್ಯ ವಿಲೇವಾರಿ ಘಟಕ ನಿರ್ಮಾಣ ಹಾಗೂ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಆರಂಭಕ್ಕೆ ಅಗತ್ಯ ಅನುದಾನ ಕಲ್ಪಿಸುವಂತೆ ರಾಜ್ಯ ಸರ್ಕಾರಕ್ಕೆ ಪತ್ರ ಬರೆಯಲಾಗುವುದು.

ನಮ್ಮಿಂದ ದಾಖಲಾಗಿರುವ 7 ಸ್ವಯಂ ಪ್ರೇರಿತ ದೂರುಗಳ ಮೇಲೆ ನಿಗಾ ಇಡಲಾಗುವುದು ಎಂದು ಹೇಳಿದರು.



### ಸೇವಾ ಪ್ರಾಧಿಕಾರಕ್ಕೆ 18 ಪ್ರಕರಣ

ಸಾರ್ವಜನಿಕರಿಂದ 298 ಟೋಕನ್ ನೀಡಲಾಗಿತ್ತು. ಅದರಲ್ಲಿ 185 ಅರ್ಜಿಗಳ ವಿಚಾರಣೆ ನಡೆಸಲಾಗಿದೆ. 95 ಅರ್ಜಿಗಳನ್ನು ಸಂಬಂಧಪಟ್ಟ ಇಲಾಖೆಗೆ ರವಾನಿಸಿದರೆ 18 ಪ್ರಕರಣಗಳನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ವರ್ಗಾಯಿಸಲಾಗಿದೆ. ಎಲ್ಲಿಯೇ ಅನ್ಯಾಯ, ಅಕ್ರಮ ನಡೆದಿದ್ದರೆ ಸಾರ್ವಜನಿಕರು ನಿರ್ಭೀತಿಯಿಂದ ದೂರು ಸಲ್ಲಿಸಬೇಕು. 3 ಲಕ್ಷ ರೂ.ಗಿಂತ ಕಡಿಮೆ ವಾರ್ಷಿಕ ಆದಾಯ ಇರುವವರಿಗೆ ಸರ್ಕಾರವೇ ವಕೀಲರು ಹಾಗೂ ನ್ಯಾಯಾಲಯ ವೆಚ್ಚ ಭರಿಸುತ್ತದೆ ಎಂದರು.

ಉಪ ಲೋಕಾಯುಕ್ತ ಸಂಸ್ಥೆಗೆ ಸಲ್ಲಿಕೆಯಾಗಿದ್ದ ಜಿಲ್ಲೆಯ 83 ಪ್ರಕರಣಗಳ ಕುರಿತು ಒಂದು ತಿಂಗಳ ಮೊದಲೇ ಅಧಿಕಾರಿಗಳಿಗೆ ಮಾಹಿತಿ ಸಮೇತ ನೀಡಲಾಗಿತ್ತು. ಜಿಲ್ಲಾ ಪ್ರವಾಸದಲ್ಲಿ ಆ ಅರ್ಜಿಗಳ ವಿಚಾರಣೆಯೂ ನಡೆದು 59 ಪ್ರಕರಣ ಇತ್ಯರ್ಥ ಕಂಡಿವೆ. ಉಳಿದ ಅರ್ಜಿ ವಿಚಾರಣೆ ಲೋಕಾಯುಕ್ತ ನ್ಯಾಯಾಲಯದಲ್ಲಿ ಮುಂದುವರೆಯಲಿದೆ ಎಂದರು.

ಮಹಾರಾಜ ಪಾರ್ಕ್ ಅಭಿವೃದ್ಧಿ, ಹೊಸ ಬಸ್ ನಿಲ್ದಾಣ, ಹುಣಸಿನಕೆರೆ, ಸತ್ಯಮಂಗಲ ಕೆರೆ ಅಭಿವೃದ್ಧಿ, ನಗರದಲ್ಲಿ 19 ಶುದ್ಧ ಕುಡಿಯುವ ನೀರಿನ ಘಟಕ ಸ್ಥಗಿತವಾಗಿರುವುದು ಹಾಗೂ ಅಗಿಲೆ ತ್ಯಾಜ್ಯ ವಿಲೇವಾರಿ ನಿರ್ವಹಣೆಯಾಗದೆ ಇರುವ ಕುರಿತು ಉಪ ಲೋಕಾಯುಕ್ತ ನ್ಯಾಯಾಲಯದಿಂದ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಳ್ಳಲಾಗಿದೆ. ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳಿಗೆ 2 ತಿಂಗಳ ಗಡುವು ನೀಡಿದ್ದು ಅಷ್ಟರಲ್ಲಿ ಸಮಸ್ಯೆ ಬಗೆಹರಿಸಬೇಕು ಅಥವಾ ಸೂಕ್ತ ವರದಿ ಸಲ್ಲಿಸಬೇಕು. ಈ ಕೆಲಸ ಆಗದಿದ್ದರೆ ಅಧಿಕಾರಿಗಳಿಗೆ ನೋಟಿಸ್ ಜಾರಿ ಮಾಡಲಾಗುವುದು. ಆ ಬಳಿಕ ಕ್ರಮ ಜರುಗಿಸುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು ಎಂದು ಹೇಳಿದರು.

### ಅಗಿಲೆ ಸಮಸ್ಯೆ ಬಗೆಹರಿಸಿ

ತಾಲ್ಲೂಕಿನ ಅಗಿಲೆಯಲ್ಲಿರುವ ತ್ಯಾಜ್ಯ ವಿಲೇವಾರಿ ಘಟಕ ಅವ್ಯವಸ್ಥೆಯ ಆಗರವಾಗಿದೆ. ಸುತ್ತಲಿನ ಗ್ರಾಮಸ್ಥರು ಸೊಳ್ಳೆ, ನೊಣಗಳಿಂದ ಅನಾರೋಗ್ಯಕ್ಕೀಡಾಗುವ ಸಾಧ್ಯತೆಯಿದೆ. ಮಾಂಸದಂಗಡಿ ತ್ಯಾಜ್ಯವನ್ನು ಅಲ್ಲಿ ಸುರಿಯುತ್ತಿರುವುದರಿಂದ ಬೀದಿ ನಾಯಿಗಳ ಹಾವಳಿಯೂ ಹೆಚ್ಚಾಗಿದೆ. ನಗರಸಭೆ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸದಿದ್ದರೆ ಭವಿಷ್ಯದಲ್ಲಿ ಹಾಸನ ನಗರ ಸಹ ತೊಂದರೆ ಅನುಭವಿಸಬೇಕಾಗುತ್ತದೆ. ಸುಸಜ್ಜಿತ ವಿಲೇವಾರಿ ಘಟಕ ನಿರ್ಮಿಸುವಂತೆ ಸರ್ಕಾರಕ್ಕೆ ನಾನು ಸಹ ಪತ್ರ ಬರೆಯುತ್ತೇನೆ ಎಂದು ಭರವಸೆ ನೀಡಿದರು.

ದಿಢೀರ್ ಭೇಟಿ ಸಂದರ್ಭದಲ್ಲಿ ಹೊಸ ಬಸ್ ನಿಲ್ದಾಣ, ಕುಡಿಯುವ ನೀರಿನ ಘಟಕ, ಕೆರೆಗಳ ನಿರ್ವಹಣೆ ಕೊರತೆ ಕಂಡುಬಂದಿದೆ. ಪ್ರಾಮಾಣಿಕವಾಗಿ ಕೆಲಸ ಮಾಡುವುದು ಅಧಿಕಾರಿಗಳ ಜವಾಬ್ದಾರಿ. ಅವರು ಕೆಲಸ ಮಾಡುತ್ತಿಲ್ಲ ಎಂಬ ಕಾರಣಕ್ಕೆ ನಾವು ಪರಿಶೀಲಿಸುತ್ತೇವೆ. ಸಂಬಂಧಪಟ್ಟವರಿಗೆ ನೋಟೀಸ್ ನೀಡುತ್ತೇವೆ. ಆಗಿರುವ ಲೋಪಗಳು ದುರುದ್ದೇಶದಿಂದ ಕೂಡಿರುತ್ತವೆ ಎಂದು ಈಗಲೇ ಹೇಳಲು ಸಾಧ್ಯವಿಲ್ಲ. ಹೀಗಾಗಿ ತಪ್ಪು ತಿದ್ದಿಕೊಳ್ಳಲು ಸಮಯಾವಕಾಶ ನೀಡುತ್ತೇವೆ. ನಾವು ನೀಡಿರುವ ಗಡುವು ಮುಗಿದರೂ ಸರಿ ಮಾಡಿಕೊಳ್ಳದಿದ್ದರೆ ಮುಂದಿನ ಕ್ರಮ ಜರುಗಿಸಬಹುದು ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.



## ಎನ್‌ಡಿಎ ತೆಕ್ಕೆಗೆ ಕಸಬಾ ಕೃಷಿ ಪತ್ತಿನ ಸಹಕಾರ ಸಂಘ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಕಸಬಾ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆಯಲ್ಲಿ ಬಿಜೆಪಿ-ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳು ಗೆಲುವು ಸಾಧಿಸಿದ್ದಾರೆ.

ಒಟ್ಟು 12 ಸ್ಥಾನಗಳ ಪೈಕಿ ಸಾಲಗಾರರಲ್ಲದ ಕ್ಷೇತ್ರದಲ್ಲಿ ಎನ್‌ಡಿಎ ಅಭ್ಯರ್ಥಿ ನಿಖಿಲ್ ಹಲಸುಲಿಗೆ ಗೆಲುವು ಸಾಧಿಸಿದ್ದು, ಸಾಲಗಾರರ ಕ್ಷೇತ್ರದಲ್ಲಿ 9 ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಉಷಾ, ಜಗದೀಶ್, ಜಯರಾಜು, ಜೆಸಿಂತಾ ಟೆಲ್ಲಿಸ್, ಮಧುಕುಮಾರ್, ರವಿ, ಸುದೀಶ್, ಸುರೇಶ್ ಆಳ್ವ, ವೆಂಕಟೇಶ್ ಗೆಲುವು ಸಾಧಿಸಿದ್ದಾರೆ.

1 ಸ್ಥಾನದಲ್ಲಿ ಕಾಂಗ್ರೆಸ್ ಬೆಂಬಲಿತ ರಾಜಶೇಖರ್ ಅವಿರೋಧ ಆಯ್ಕೆಯಾಗಿದ್ದಾರೆ. ಪರಿಶಿಷ್ಟ ಪಂಗಡ ವರ್ಗದಿಂದ ಯಾರೂ ನಾಮಪತ್ರ ಸಲ್ಲಿಸದೆ ಸ್ಥಾನ ಖಾಲಿ ಉಳಿದಿದೆ.

ಶಾಸಕ ಸಿಮೆಂಟ್ ಮಂಜು ಮಾತನಾಡಿ, ಕಸಬಾ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ನಡೆದ ಚುನಾವಣೆಯಲ್ಲಿ ಮತದಾರರು ಉತ್ತಮ ಅಭ್ಯರ್ಥಿಗಳನ್ನು ಆಯ್ಕೆ ಮಾಡಿದ್ದಾರೆ. ರೈತರಿಗೆ ಅನುಕೂಲವಾಗಬೇಕು ಹಾಗೂ ಭ್ರಷ್ಟಾಚಾರ ರಹಿತ ಆಡಳಿತ ನೀಡಬೇಕು. ಈ ನಿಟ್ಟಿನಲ್ಲಿ ಈ ಚುನಾವಣೆಯಲ್ಲಿ ಪ್ರತ್ಯಕ್ಷವಾಗಿ ಪರೋಕ್ಷವಾಗಿ ಕೆಲಸ ಮಾಡಿದ ಎಲ್ಲರಿಗೂ ಅಭಿನಂದನೆ ಸಲ್ಲಿಸುತ್ತೇನೆ ಎಂದರು. ಬಿಜೆಪಿ ತಾಲ್ಲೂಕು ಅಧ್ಯಕ್ಷ ವಳಲಹಳ್ಳಿ ಅಶ್ವಥ್ ಮಾತನಾಡಿ, ಕಸಬಾ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಈ ಹಿಂದೆ ವ್ಯಾಪಕ ಭ್ರಷ್ಟಚಾರ ನಡೆದಿತ್ತು. ನಮ್ಮ ಅಭ್ಯರ್ಥಿಗಳು ಗೆಲ್ಲುವ ಮೂಲಕ ಭ್ರಷ್ಟರಿಗೆ ಪಾಠ ಕಲಿಸಿದ್ದಾರೆ. ಶಾಸಕ ಸಿಮೆಂಟ್ ಮಂಜು ಹಾಗೂ ಮಾಜಿ ಶಾಸಕ ಎಚ್.ಕೆ. ಕುಮಾರಸ್ವಾಮಿ ನೇತೃತ್ವದಲ್ಲಿ ಈ ಚುನಾವಣೆ ನಡೆದಿದ್ದು ಎನ್‌ಡಿಎ ಅಭ್ಯರ್ಥಿಗಳು ಕ್ಲೀನ್ ಸ್ವೀಪ್ ಮಾಡಿದ್ದು ಮುಂದಿನ ದಿನಗಳಲ್ಲಿ ಕೃಷಿ ಪತ್ತಿನ ಸಹಕಾರ ಸಂಘವನ್ನು ಅಭಿವೃದ್ಧಿಯ ಪಥದಲ್ಲಿ ನೂತನ ನಿರ್ದೇಶಕರು ತೆಗೆದುಕೊಂಡು ಹೋಗುತ್ತಾರೆ ಎಂದು ಭರವಸೆ ನೀಡಿದರು.

ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಸುಪ್ರದೀಪ್ತ ಯಜಮಾನ್, ಟಿಎಪಿಸಿಎಂಎಸ್ ಅಧ್ಯಕ್ಷ ಶಶಿಕುಮಾರ್, ಬಿಜೆಪಿ ಪ್ರಧಾನ ಕಾರ್ಯದರ್ಶಿಗಳಾದ ಅಗ್ನಿ ಸೋಮಶೇಖರ್, ಮಧು ಬೊಮ್ಮನಕೆರೆ, ಬಿರಡಹಳ್ಳಿ ಗ್ರಾಪಂ ಅಧ್ಯಕ್ಷ ಸತೀಶ್, ಪುರಸಭೆ ಸದಸ್ಯ ಆದರ್ಶ, ಎಪಿಎಂಸಿ ಮಾಜಿ ಅಧ್ಯಕ್ಷ ಕವನ್ ಗೌಡ, ಬಿಜೆಪಿ ನಗರ ಅಧ್ಯಕ್ಷ ಲೋಕೇಶ್, ಬಿಜೆಪಿ ಮುಖಂಡ ಎ.ವಿ. ನರೇಶ್, ಪುನೀತ್ ಬನ್ನಹಳ್ಳಿ ಇತರರಿದ್ದರು.



## ಅಪಘಾತದಲ್ಲಿ ಬೈಕ್ ಸವಾರ ಸಾವು

ಹಾಸನ: ನಿರ್ಲಕ್ಷ್ಯದ ಚಾಲನೆಯಿಂದ ಬೈಕ್‌ನಿಂದ ಕೆಳಗೆ ಬಿದ್ದು ವ್ಯಕ್ತಿ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಕೊಕ್ಕನಘಟ್ಟ ಗ್ರಾಮದಲ್ಲಿ ಶುಕ್ರವಾರ ನಡೆದಿದೆ. ಗ್ರಾಮದ ಶಿವಣ್ಣ ಮೃತರು. ಮಧ್ಯಾಹ್ನ 2.30ರ ಸಮಯದಲ್ಲಿ ಹಾಸನ-ಗೊರೂರು ರಸ್ತೆಯ ಮಹೇಶ್ ಎಂಬುವರ ಅಂಗಡಿ ಮುಂದೆ ವೇಗವಾಗಿದ್ದ ಬೈಕ್ ಅನ್ನು ಏಕಾಏಕಿ ಬಲಕ್ಕೆ ತಿರುಗಿಸಿದ್ದರಿಂದ ನಿಯಂತ್ರಣ ತಪ್ಪಿ ರಸ್ತೆ ಮೇಲೆ ಬಿದ್ದಿದ್ದಾರೆ. ಗಂಭೀರ ಗಾಯಗೊಂಡಿದ್ದ ಅವರನ್ನು ನಗರದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.




# ನಗರದಲ್ಲಿ ಸಂಚಾರ ದಟ್ಟಣೆಗೆ ಜನರು ಸುಸ್ತು

## ಜಿಲ್ಲಾಡಳಿತ ಆದೇಶಕ್ಕೆ ಬೆಲೆ ಇಲ್ಲ | ಟ್ರಾಫಿಕ್ ಪೊಲೀಸರ ಹೈರಾಣ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರ ಹೊರವಲಯದ ರಾಜೀವ್ ಎಂಜಿನೀಯರಿಂಗ್ ಕಾಲೇಜು ಸಮೀಪ ರಾಷ್ಟ್ರೀಯ ಹೆದ್ದಾರಿಯಲ್ಲಿ ರೈಲ್ವೆ ಮೇಲ್ಸೇತುವೆ ರಿಪೇರಿ ಕಾರ್ಯ ಕೈಗೊಂಡಿರುವುದು ವಾಹನ ಸಂಚಾರ ನಿಷೇಧಿಸಿದ್ದು ನಗರದಲ್ಲಿ ಸಂಚಾರ ದಟ್ಟಣೆ ಹೆಚ್ಚಾಗಿ ಪ್ರಯಾಣಿಕರು ಪರದಾಡುವಂತಾಗಿದೆ.

ಮುಖ್ಯ ರಸ್ತೆ ಸಂಪೂರ್ಣ ಬಂದ್ ಮಾಡಿರುವ ಹಿನ್ನಲೆಯಲ್ಲಿ ನಗರದಲ್ಲಿ ಸಂಚಾರ ದಟ್ಟಣೆ ನಿಯಂತ್ರಿಸಲು ಜಿಲ್ಲಾಡಳಿತ ಬದಲಿ ಮಾರ್ಗಗಳ ವ್ಯವಸ್ಥೆ ಮಾಡಿದೆಯಾದರೂ ಬೆಂಗಳೂರು-ಮಂಗಳೂರು ಸಂಪರ್ಕಿಸುವ ಬಹುತೇಕ ಲಾರಿ, ಬಸ್, ಕಾರುಗಳು ನಗರದೊಳಗೆ ಪ್ರವೇಶಿಸುತ್ತಿವೆ. ಹೀಗಾಗಿ ಸ್ಥಳೀಯರು ವಿಪರೀತ ತೊಂದರೆ ಅನುಭವಿಸುವಂತಾಗಿದೆ. ಧೂಳು, ಶಬ್ದ ಮಾಲಿನ್ಯದಿಂದ ರಸ್ತೆ ಪಕ್ಕದ ನಿವಾಸಿಗಳು, ಅಂಗಡಿ, ಹೋಟೆಲ್ ಮಾಲೀಕರು ದಿಕ್ಕು ತೋಚದಂತಾಗಿದ್ದಾರೆ.

ಮೇಲ್ಸೇತುವೆ ಕಾಮಗಾರಿ ಹಿನ್ನೆಲೆಯಲ್ಲಿ ಮೇ 4 ರಿಂದ 14ರ ವರೆಗೆ ಲಘು ವಾಹನಗಳಿಗೆ ಮಾತ್ರ ಹೆದ್ದಾರಿಯಲ್ಲಿ ಸಂಚಾರಕ್ಕೆ ಅನುವು ಮಾಡಿಕೊಡಲಾಗಿತ್ತು. ಭಾರಿ ಗಾತ್ರದ ವಾಹನಗಳಿಗೆ ಬದಲಿ ಮಾರ್ಗ ಸೂಚಿಸಲಾಗಿತ್ತು. ಮೇ 15 ರಿಂದ ಜೂ. 14ರ ವರೆಗೆ ಎಲ್ಲಾ ರೀತಿಯ ವಾಹನ ಸಂಚಾರ ನಿರ್ಬಂಧಿಸಿರುವುದರಿಂದ ಸಮಸ್ಯೆ ಮತ್ತಷ್ಟು ಬಿಗಡಾಯಿಸಿದೆ.



### ವಾಹನ ಬರದಂತೆ ತಡೆಯಿರಿ

ರೈಲ್ವೆ ಮೇಲ್ಸೇತುವೆಯ ಬೀಮ್‌ಗಳು ಕುಸಿದ ಹಿನ್ನಲೆಯಲ್ಲಿ ರೈಲ್ವೆ ಇಲಾಖೆ ಜೂ. 14ರ ವರೆಗೆ ಸಂಚಾರ ನಿರ್ಬಂಧಿಸಿದೆ. ವಾಹನಗಳ ಓಡಾಟಕ್ಕೆ ಪ್ರತ್ಯೇಕ ಮಾರ್ಗವನ್ನು ಜಿಲ್ಲಾಡಳಿತ ಕಲ್ಪಿಸಿದೆ. ಹೀಗಾಗಿ ನಗರದಲ್ಲಿ ಸಂಚಾರ ದಟ್ಟಣೆ ನಿಯಂತ್ರಣವಾಗಬೇಕಾದರೆ ನಗರದ ಒಳಗೆ ಪ್ರವೇಶಿಸುವ ವಾಹನಗಳ ನಿಷೇಧಿಸಬೇಕು. ಆಯಕಟ್ಟಿನ ಸ್ಥಳಗಳಲ್ಲಿ ಪೊಲೀಸರು ನಿಂತು ಹೊರ ಜಿಲ್ಲೆಗೆ ಹೋಗುವ ವಾಹನಗಳು ನಗರ ಪ್ರವೇಶಿಸದಂತೆ ಮುನ್ನೆಚ್ಚರಿಕೆ ವಹಿಸಬೇಕಿದೆ.

### ಬದಲಿ ಮಾರ್ಗ ಯಾವುದು

ಬುಸ್ತೆನಹಳ್ಳಿ ಸರ್ಕಲ್-ಡೈರಿ ವೃತ್ತ ಮಾರ್ಗವಾಗಿ-ಸಾಲಗಾಮೆ ರಸ್ತೆಯ ಸುಬೇದಾರ್ ಸರ್ಕಲ್, ಬೇಲೂರು ರಸ್ತೆ ವಿಜಯ ನಗರ ಬಡಾವಣೆಯ 80 ಅಡಿ ಮುಖ್ಯ ರಸ್ತೆ-ದೇವರಾಯಪಟ್ಟಣ ವೃತ್ತ ಮಾರ್ಗದ ಮೂಲಕ ಮುಖ್ಯ ರಸ್ತೆ ಸಂಪರ್ಕಿಸುವಂತೆ ಜಿಲ್ಲಾಡಳಿತ ಸೂಚಿಸಿದೆ. ವಾಹನ ಚಾಲಕರಿಗೆ ಅನುಕೂಲವಾಗುವಂತೆ ರಸ್ತೆಯ ಎರಡೂ ಕಡೆ ಸೂಚನಾ ಫಲಕ, ಬ್ಯಾರಿಕೇಡ್ ಸಹ ಅಳವಡಿಸಲಾಗಿದೆ. ಆದರೆ ಹಾಸನ ನಗರಕ್ಕೆ ಬರುವವರಿಗೆ ದಾರಿ ಮಾಡಿಕೊಟ್ಟಿರುವುದರಿಂದ ಹೊರ ಜಿಲ್ಲೆಗೆ ತೆರಳುವ ವಾಹನಗಳು ಸಹ ಅದೇ ರಸ್ತೆಯಲ್ಲಿ ಬರುತ್ತಿವೆ. ಇದರಿಂದ ಎನ್.ಆರ್. ವೃತ್ತ, ಸಂತೆಪೇಟೆ, ಆರ್.ಸಿ. ರಸ್ತೆ, ಸಾಲಗಾಮೆ ರಸ್ತೆಯಲ್ಲಿ ಸಂಚಾರ ದಟ್ಟಣೆ ಹೆಚ್ಚಾಗಿದೆ. ನಗರದಿಂದ ಕಾರು ಅಥವಾ ಬೈಕ್ ಸವಾರರು ಯಾವುದೇ ಬೈಪಾಸ್ ತಲುಪಬೇಕೆಂದರು ಕನಿಷ್ಠ ಒಂದು ಗಂಟೆ ಸಮಯ ವ್ಯಯವಾಗುತ್ತಿದೆ. ಪೆಟ್ರೋಲ್, ಡೀಸೆಲ್, ತರಕಾರಿ ಮತ್ತಿತರ ಸಾಮಾಗ್ರಿ ಸಾಗಿಸುವ ಭಾರಿ ಗಾತ್ರದ ಲಾರಿಗಳು ನಗರದಲ್ಲೇ ಸಂಚರಿಸುತ್ತಿರುವುದರಿಂದ ಇತರೆ ವಾಹನ ಸಂಚಾರದಲ್ಲಿ ವ್ಯತ್ಯಯವಾಗುತ್ತಿರುವುದು ಮಾತ್ರವಲ್ಲದೆ ಆತಂಕವು ಹೆಚ್ಚಿದೆ.

### ಟ್ರಾಫಿಕ್ ಪೊಲೀಸರ ಹೈರಾಣ

ಕಳೆದ ಒಂದು ವಾರದಿಂದ ನಗರದಲ್ಲಿ ಟ್ರಾಫಿಕ್ ಸಮಸ್ಯೆ ನಿಯಂತ್ರಿಸುವುದೇ ಸಂಚಾರ ಪೊಲೀಸರ ಕೆಲಸವಾಗಿದೆ. ಸಂತೆಪೇಟೆ, ತಣ್ಣೀರುಹಳ್ಳ ವೃತ್ತದಲ್ಲಿ ಸಿಗ್ನಲ್‌ಗಳು ಸರಿಯಾಗಿ ಕಾರ್ಯನಿರ್ವಹಿಸದ ಹಿನ್ನಲೆಯಲ್ಲಿ ಪೊಲೀಸರೇ ರಸ್ತೆ ಮಧ್ಯೆ ನಿಂತು ವಾಹನಗಳಿಗೆ ಮಾರ್ಗ ತೋರಿಸುತ್ತಿದ್ದಾರೆ. ಲಾರಿ, ಬಸ್‌ಗಳು ಏಕಕಾಲಕ್ಕೆ ಎಲ್ಲಾ ದಿಕ್ಕುಗಳಿಂದ ಬರುವುದರಿಂದ ಪೊಲೀಸರು ಸಹ ತೊಂದರೆ ಅನುಭವಿಸುವಂತಾಗಿದೆ.

# ಬೆಂಗಳೂರು-ಮಂಗಳೂರು ರೈಲು ಸಂಚಾರ 4 ತಿಂಗಳು ರದ್ದು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸಕಲೇಶಪುರ-ಸುಬ್ರಹ್ಮಣ್ಯ ರೋಡ್ ಮಾರ್ಗದಲ್ಲಿ ರೈಲ್ವೆ ವಿದ್ಯುದ್ದೀಕರಣ ಕಾಮಗಾರಿ ನಡೆಯುಲಿರುವ ಕಾರಣ ಬೆಂಗಳೂರು-ಮಂಗಳೂರು, ಬೆಂಗಳೂರು-ಕಾರವಾರ ನಡುವೆ ಸಂಚರಿಸುವ 6 ರೈಲುಗಳ ಸಂಚಾರ ಮುಂದಿನ 4 ತಿಂಗಳ ಕಾಲ ರದ್ದಾಗಲಿವೆ ಎಂದು ರೈಲ್ವೆ ಇಲಾಖೆ ಮಾಹಿತಿ ನೀಡಿದೆ.

ಜೂನ್ 1 ರಿಂದ ನ. 1ರ ವರೆಗೆ ಸುರಕ್ಷತೆ ಮತ್ತು ರೈಲ್ವೆ ವಿದ್ಯುದ್ದೀಕರಣ ಕಾಮಗಾರಿ ನಡೆಯುಲಿರುವ ಕಾರಣದಿಂದ ಕೆಲವು ರೈಲುಗಳ ಸಂಚಾರವನ್ನು ತಾತ್ಕಾಲಿಕವಾಗಿ ರದ್ದುಪಡಿಸಲಾಗಿದೆ. ಗೊಮ್ಮಟೇಶ್ವರ ಎಕ್ಸ್‌ಪ್ರೆಸ್, ಕಾರವಾರ ಎಕ್ಸ್‌ಪ್ರೆಸ್, ಮಂಗಳೂರು ಸೆಂಟ್ರಲ್ ವಾರದ ವಿಶೇಷ ಎಕ್ಸ್‌ಪ್ರೆಸ್ ಮುಂದಿನ 5 ತಿಂಗಳು ರದ್ದಾಗಲಿವೆ. ಬೆಂಗಳೂರಿನಿಂದ ಕರಾವಳಿ ಭಾಗಕ್ಕೆ ಸಂಚಾರ ನಡೆಸುವ 12 ರೈಲುಗಳ ಪೈಕಿ 6 ರೈಲುಗಳು ಸಂಪೂರ್ಣ ರದ್ದಾಗುತ್ತಿವೆ. ಈ ಮೂಲಕ ಪ್ರಯಾಣಿಕರು ಬದಲಿ ಮಾರ್ಗ ಆಯ್ದುಕೊಳ್ಳಬೇಕಾದ ಅನಿವಾರ್ಯತೆ ಇದೆ.




### ರದ್ದಾಗುವ ರೈಲುಗಳು

ಮೇ 31 ರಿಂದ ನವೆಂಬರ್ 1 ರವರೆಗೆ ಶನಿವಾರಗಳಂದು ಸಂಚರಿಸುವ ಯಶವಂತಪುರ - ಮಂಗಳೂರು ಜಂಕ್ಷನ್ ಸಾಪ್ತಾಹಿಕ ಎಕ್ಸ್‌ಪ್ರೆಸ್ (ರೈಲು ಸಂಖ್ಯೆ 16539) ರದ್ದು. ಜೂನ್ 1 ರಿಂದ ನವೆಂಬರ್ 2 ರವರೆಗೆ ಭಾನುವಾರಗಳಂದು ಸಂಚರಿಸುವ ಮಂಗಳೂರು ಜಂಕ್ಷನ್-ಯಶವಂತಪುರ ಸಾಪ್ತಾಹಿಕ ಎಕ್ಸ್‌ಪ್ರೆಸ್ (ರೈಲು ಸಂಖ್ಯೆ 16540) ರದ್ದು. ಜೂನ್ 1 ರಿಂದ ಅಕ್ಟೋಬರ್ 30 ರವರೆಗೆ ಮಂಗಳವಾರ, ಗುರುವಾರ ಮತ್ತು ಭಾನುವಾರಗಳಂದು ಸಂಚರಿಸುವ ಯಶವಂತಪುರ-ಮಂಗಳೂರು ಜಂಕ್ಷನ್ ಟ್ರೈ-ವೀಕ್ಲಿ ಎಕ್ಸ್‌ಪ್ರೆಸ್ (ರೈಲು ಸಂಖ್ಯೆ 16575) ರದ್ದುಗೊಳ್ಳಲಿದೆ.

ಜೂನ್ 2 ರಿಂದ ಅಕ್ಟೋಬರ್ 31 ರವರೆಗೆ ಸೋಮವಾರ, ಬುಧವಾರ ಮತ್ತು ಶುಕ್ರವಾರಗಳಂದು ಸಂಚರಿಸುವ ಮಂಗಳೂರು-ಯಶವಂತಪುರ ಟ್ರೈ-ವೀಕ್ಲಿ ಎಕ್ಸ್‌ಪ್ರೆಸ್ (ರೈಲು ಸಂಖ್ಯೆ 16576) ರದ್ದು. ಜೂನ್ 2 ರಿಂದ ಅಕ್ಟೋಬರ್ 31 ರವರೆಗೆ ಸೋಮವಾರ, ಬುಧವಾರ ಮತ್ತು ಶುಕ್ರವಾರಗಳಂದು ಸಂಚರಿಸುವ ಯಶವಂತಪುರ-ಕಾರವಾರ ಟ್ರೈ-ವೀಕ್ಲಿ ಎಕ್ಸ್‌ಪ್ರೆಸ್ (ರೈಲು ಸಂಖ್ಯೆ 16515) ರದ್ದು. ಜೂನ್ 3 ರಿಂದ ನವೆಂಬರ್ 1 ರವರೆಗೆ ಮಂಗಳವಾರ, ಗುರುವಾರ ಮತ್ತು ಶನಿವಾರಗಳಂದು ಸಂಚರಿಸುವ ಕಾರವಾರ-ಯಶವಂತಪುರ ಟ್ರೈ-ವೀಕ್ಲಿ ಎಕ್ಸ್ ಪ್ರೆಸ್ (ರೈಲು ಸಂಖ್ಯೆ 16516) ರೈಲು ರದ್ದು ಪಡಿಸಲಾಗುತ್ತದೆ.

# ಅನಧಿಕೃತ ಕ್ಲಿನಿಕ್‌ಗಳಿಗೆ ಆರೋಗ್ಯ ಇಲಾಖೆ ಬೀಗ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಕೆಪಿಎಂಇ ಅಡಿ ನೋಂದಣಿಯಾಗದೆ ಕಾರ್ಯನಿರ್ವಹಿಸುತ್ತಿದ್ದ ನಗರದ ಗಣಪತಿ ಕ್ಲಿನಿಕ್‌ಗೆ ಬೀಗ ಹಾಕಿರುವ ಪ್ರಕರಣ ನಡೆದಿದೆ.

ಜಿಲ್ಲಾ ಕೆಪಿಎಂಇ ನೋಡಲ್ ಅಧಿಕಾರಿ ಹಾಗೂ ತಾಲ್ಲೂಕು ಆರೋಗ್ಯ ಅಧಿಕಾರಿ ಮತ್ತು ತಂಡ ಹಾಗೂ ಜಿಲ್ಲಾ ಆಯುಷ್ ಅಧಿಕಾರಿಗಳೊಂದಿಗೆ ಹೊಸ ಬಸ್ ನಿಲ್ದಾಣದ ಎದುರು ಇರುವ ಗಣಪತಿ ಕ್ಲಿನಿಕ್‌ಗೆ ಅನಿರೀಕ್ಷಿತ ಭೇಟಿ ನೀಡಿದಾಗ ಮಾಹಿತಿ ಬಹಿರಂಗವಾಗಿದೆ.

ಕೆಪಿಎಂಸಿ ಕಾಯ್ದೆಗೆ ಸಂಬಂಧಿಸಿದ ಯಾವುದೇ ಕ್ರಮವನ್ನುಅನುಸರಿಸದೆ ಅಕ್ರಮವಾಗಿ ಕ್ಲಿನಿಕ್ ನಡೆಸುತ್ತಿರುವುದು ಗಮನಕ್ಕೆ ಬಂದು ಕ್ಲಿನಿಕ್‌ಗೆ ನೋಟಿಸ್ ಜಾರಿ ಮಾಡಿ ಬೀಗ ಹಾಕಿ ಸೀಜ್ ಮಾಡಲಾಗಿದೆ.

ಇಂಡಸ್ಟ್ರಿಯಲ್ ಏರಿಯಾದ ಸಿದ್ದೇಶ್ವರ ಕ್ಲಿನಿಕ್ ಸಹ ಕೆಪಿಎಂಇ ನೋಂದಣಿಯಾಗದೆ ಅಕ್ರಮವಾಗಿದೆ. ಚನ್ನಪಟ್ಟಣದ ಹೇಮಂತ್ ಕ್ಲಿನಿಕ್, ದಕ್ಷಾ ಕ್ಲಿನಿಕ್ ಹಾಗೂ ಬೂವನಹಳ್ಳಿ ಗ್ರಾಮದಲ್ಲಿರುವ ವಿ.ಆರ್. ಕ್ಲಿನಿಕ್ ಈ ಮೂರು ಕ್ಲಿನಿಕ್‌ಗಳು ಕೆಪಿಎಂಇ ಅಡಿಯಲ್ಲಿ ಆಯುರ್ವೇದಿಕ್ ಪದ್ಧತಿಯಲ್ಲಿ ಲೈಸೆನ್ಸ್ ಪಡೆದು ಅಲೋಪತಿ ಔಷಧ ನೀಡುತ್ತಾರೆ. ಬಿಎಎಂಎಸ್ ವೈದ್ಯರು ಕ್ರಾಸ್ ಪ್ರಾಕ್ಟೀಸ್ ಮಾಡುತ್ತಿರುತ್ತಾರೆ. ಜೈವಿಕ ನಿರ್ವಹಣೆಯಲ್ಲಿ ಕುಂಠಿತವಾಗಿರುತ್ತದೆ. ಕ್ಲಿನಿಕ್‌ನ ಒಳಭಾಗದಲ್ಲಿ ಡ್ರಿಪ್‌ಸ್ಟ್ಯಾಂಡ್ ಲ್ಯಾಬ್ ಪರೀಕ್ಷೆ ಮಾಡುವ ಪರಿಕರಗಳು, ಇಂಜೆಕ್ಷನ್ ನೀಡಲ್‌ಗಳು ಹಾಗೂ ಅಲೋಪತಿ ಔಷಧಿಗಳು ದೊರೆತಿವೆ. ಈ ಎಲ್ಲಾ ಮಾನದಂಡಗಳನ್ನು ಗಮನಿಸಿ ಈ ಮೂರು ಕ್ಲಿನಿಕ್ ಸೀಜ್ ಮಾಡಲಾಗಿದೆ.

# ಪ್ರಕರಣ ಇತ್ಯರ್ಥಕ್ಕೆ ಸರ್ವರ ಸಹಕಾರ: ಉಪ ಲೋಕಾಯುಕ್ತ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲೆಯಲ್ಲಿ ಅಧಿಕಾರಿಗಳು ಹಾಗೂ ಸಾರ್ವಜನಿಕರು ಎರಡು ದಿನಗಳು ಬಹಳ ಸೌಜನ್ಯಯುತವಾಗಿ ಪ್ರಕರಣಗಳನ್ನು ಇತ್ಯರ್ಥ ಪಡಿಸಲು ಅತ್ಯಂತ ಹೃದಯ ಪೂರ್ವಕವಾಗಿ ಸಹಕಾರ ನೀಡಿದ್ದಾರೆ ಎಂದು ಉಪ ಲೋಕಾಯುಕ್ತರಾದ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ತಿಳಿಸಿದ್ದಾರೆ.

ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಶುಕ್ರವಾರ ಸಂಜೆ ನಡೆದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಉಪ ಲೋಕಾಯುಕ್ತರ ಕಚೇರಿಯಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ಆಯ್ದ ಪ್ರಕರಣಗಳನ್ನು ಇತ್ಯರ್ಥಪಡಿಸುವ ಸಂಬಂಧ ಜಿಲ್ಲೆಯ ಜಿಲ್ಲಾಧಿಕಾರಿ ಅವರು ಮತ್ತು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸಮಸ್ಯೆ ಪರಿಹಾರ ಮಾಡಲು ಪ್ರಾಮಾಣಿಕ ಪ್ರಯತ್ನ ಮಾಡಿದ್ದಾರೆ ಎಂದು ತಿಳಿಸಿದರು.

### ಮಹಿಳಾ ಅಧಿಕಾರಿಗಳಿಗೆ ಬಹುಪರಾಕ್

ರಾಜಕೀಯ ಕ್ಷೇತ್ರದಲ್ಲಿ ಹೆಸರುವಾಸಿಯಾದ ಜಿಲ್ಲೆಯಲ್ಲಿ ಬಹಳ ದಕ್ಷತೆಯಿಂದ ಕೆಲಸ ಮಾಡುತ್ತಿರುವ ಮೂರು ಅಧಿಕಾರಿಗಳನ್ನು ನೋಡಿದರೆ ತುಂಬಾ ಖುಷಿ ಆಗುತ್ತದೆ. ಪ್ರಕರಣ ಇತ್ಯರ್ಥಪಡಿಸುವ ಸಂದರ್ಭದಲ್ಲಿ ಅವರು ಬಹಳ ತಾಳ್ಮೆಯಿಂದ ಸಾರ್ವಜನಿಕರಿಗೆ ವಿಷಯಗಳ ಕುರಿತು ಮನವರಿಕೆ ಮಾಡುತ್ತಿರುವುದನ್ನು ಗಮನಿಸಿದ್ದೇನೆ. ಇವರು ಯಾವ ನ್ಯಾಯಾಧೀಶರಿಗೂ ಕಡಿಮೆಯಿಲ್ಲ. ಕಾನೂನು ಚೌಕಟ್ಟಿನಲ್ಲಿ ಕೆಲಸ ಮಾಡಿದ್ದಾರೆ ಎಂದು ಜಿಲ್ಲಾಧಿಕಾರಿ, ಜಿಪಂ ಸಿಇಒ ಹಾಗೂ ಎಸ್ಪಿಗೆ ಅಭಿನಂದನೆ ತಿಳಿಸಿದರು.

ದೇಶ ಕಟ್ಟುವಲ್ಲಿ ಮಹಿಳೆಯರ ಪಾತ್ರ ಬಹಳ ದೊಡ್ಡದು ಎಂದ ಅವರು ಹಾಸನ ಜಿಲ್ಲೆಯ ಅಭಿವೃದ್ಧಿಗೆ ಈ ಮೂವರು ಮಹಿಳೆಯರು ಕರ್ತವ್ಯ ನಿರ್ವಹಿಸುತ್ತ ಮುನ್ನಡೆಯುತ್ತಿದ್ದಾರೆ ನನ್ನ ಕರ್ತವ್ಯದಲ್ಲಿಯೂ ಉತ್ಕೃಷ್ಟ ಸಹಕಾರ ನೀಡಿದ್ದಾರೆ ಎಂದರು. ಒಟ್ಟು 83 ಪ್ರಕರಣಗಳಲ್ಲಿ 63 ಪ್ರಕರಣಗಳು ಮುಕ್ತಾಯಗೊಂಡಿವೆ. 43 ಪ್ರಕರಣಗಳು ತೀರ್ಮಾನ ಆಗಿ ದೂರುದಾರರಿಗೆ ನ್ಯಾಯ ದೊರಕಿದೆ. ಯಾರಿಗೂ ಅಸಮಾಧಾನ ಆಗದಂತೆ ಪ್ರಕರಣ ಇತ್ಯರ್ಥ ಪಡಿಸಲಾಗಿದೆ. ಈ ಕಾರ್ಯಕ್ರಮದ ನಂತರ ಉಳಿದ 16 ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗುವುದು ಎಂದು ತಿಳಿಸಿದರು.

ಅದೇ ರೀತಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯರಾದ ದಾಕ್ಷಾಯಿಣಿ ಅವರು ಕೂಡ ತುಂಬಾ ಸಹಕಾರ ನೀಡಿದ್ದಾರೆ ಅವರಿಗೂ ಸಹ ಕೆಲವು ಕೆಲಸ ವಹಿಸಿರುವುದಾಗಿ ತಿಳಿಸಿದರು.

ಜಿಲ್ಲಾಧಿಕಾರಿ ಸಿ. ಸತ್ಯಭಾಮ ಮಾತನಾಡಿ, ನ್ಯಾಯಾಮೂರ್ತಿ ಅವರು ಊಟದ ಸಮಯ ಹೊರತುಪಡಿಸಿ ಉಳಿದ ಸಮಯವನ್ನು ಪ್ರಕರಣ ಇತ್ಯರ್ಥಕ್ಕೆ ಮೀಸಲಿಟ್ಟರು. ಅವರ ಕರ್ತವ್ಯ ಪ್ರಜ್ಞೆಯನ್ನು ನಾವೆಲ್ಲರೂ ಮೈಗೂಡಿಸಿಕೊಳ್ಳಬೇಕು ಎಂದು ಹೇಳಿದರು.

ಕರ್ನಾಟಕ ಲೋಕಾಯುಕ್ತದ ವಿಚಾರಣೆಗಳು 07 ಅಪರ ನಿಬಂಧಕ ಪೃಥ್ವಿರಾಜ್ ವರ್ಣೇಕರ್, ಲೋಕಾಯುಕ್ತ ಕಾನೂನು ಅಭಿಪ್ರಾಯ 02 ಸಹಾಯಕ ನಿಬಂಧಕ ಬಿ. ಶುಭವೀರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಬಿ.ಕೆ. ದಾಕ್ಷಾಯಿಣಿ, ಉಪಲೋಕಾಯುಕ್ತರ ಆಪ್ತ ಕಾರ್ಯದರ್ಶಿ ಕಿರಣ್ ಪಿ.ಎಂ. ಪಾಟೀಲ್, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ, ಲೋಕಾಯುಕ್ತ ಪೊಲೀಸ್ ಅಧಿಕ್ಷಕಿ ಸ್ನೇಹ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಹ್ಮಮದ್ ಸುಜೀತಾ, ಅಪರ ಜಿಲ್ಲಾಧಿಕಾರಿ ಕೆ.ಟಿ.ಶಾಂತಲ ಹಾಜರಿದ್ದರು.

# ಸ್ವೀಕೃತಿ ಪತ್ರ ನೋಂದಣಿಗೆ ಸಲಹೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹೊಳೆನರಸೀಪುರ: ಬೆಂಬಲ ಬೆಲೆಗೆ ರೈತರು ಮಾರಾಟ ಮಾಡಿ ಪಡೆದಿರುವ ಸ್ವೀಕೃತಿ ಪತ್ರವನ್ನು ಖರೀದಿ ಕೇಂದ್ರಕ್ಕೆ ನೀಡಿ ನೋಂದಣಿ ಮಾಡಿಸಿಕೊಳ್ಳಬೇಕು ಎಂದು ಖರೀದಿ ಕೇಂದ್ರ ಅಧಿಕಾರಿ ಶಮೀದ್ ಅಲಿ ತಿಳಿಸಿದ್ದಾರೆ.

ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಡಿ ಕೃಷಿ ಉತ್ಪನ್ನವಾದ ರಾಗಿಗೆ ಬೆಂಬಲ ನೀಡಿ ಖರೀದಿಸಿದೆ. ತಾಲ್ಲೂಕಿನಲ್ಲಿ ಈ ವರೆಗೆ 33 ಸಾವಿರ ಕ್ವಿಂಟಾಲ್ ರಾಗಿ ಮಾರಾಟ ಮಾಡಲು ನೋಂದಾಯಿಸಿಕೊಂಡಿದ್ದಾರೆ.




ರೈತರಿಂದ ಈ ವರೆಗೆ 22 ಸಾವಿರ ಕ್ವಿಂಟಾಲ್ ರಾಗಿ ಖರೀದಿಸಲಾಗಿದೆ. ಖರೀದಿ ಕೇಂದ್ರಕ್ಕೆ ಮಾರಾಟ ಮಾಡಿದ ರೈತರು ಸ್ವೀಕೃತಿ ಪತ್ರವನ್ನು ತಂದು ರೈತ ಭವನದ ಕಚೇರಿಯಲ್ಲಿ ನೊಂದಾಯಿಸಿಕೊಳ್ಳಬೇಕಿದೆ. ಆಗ ಮಾತ್ರವೇ ಖರೀದಿಸಿದ ರಾಗಿಯ ಹಣ ಖಾತೆಗೆ ಪಾವತಿಯಾಗುತ್ತದೆ. ಇಲ್ಲವಾದಲ್ಲಿ ಹಣ ಬರುವುದಿಲ್ಲ ಎಂದಿದ್ದಾರೆ.

ಈಗಾಗಲೇ ಹಲವು ರೈತರು ಸ್ವೀಕೃತಿ ಪಡೆದಿದ್ದು, ನೊಂದಾಯಿಸಿಕೊಂಡಿರುವುದಿಲ್ಲ. ಇಂದಿಗೂ ರೈತರು ರಾಗಿ ತಂದು ಖರೀದಿ ಕೇಂದ್ರದಲ್ಲಿ ಮಾರಾಟ ಮಾಡಲು ಅವಕಾಶ ಇದೆ ಎಂದು ತಿಳಿಸಿದ್ದಾರೆ.

# ರಾಷ್ಟ್ರೀಯ ಹೆದ್ದಾರಿಯಲ್ಲಿ ವ್ಯಾನ್ ಪಲ್ಟಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ತಾಲ್ಲೂಕಿನ ಹಿರೀಸಾವೆ ಸಮೀಪ ರಾಷ್ಟ್ರೀಯ ಹೆದ್ದಾರಿ 75ರ ಹೊನ್ನೇನಹಳ್ಳಿ ಬಳಿ ಶನಿವಾರ ಅಕ್ರಮವಾಗಿ ಕಸಾಯಿ ಖಾನೆಗೆ ಕರುಗಳನ್ನು ಸಾಗಿಸುತ್ತಿದ್ದ ಮಾರುತಿ ವ್ಯಾನ್ ಚಾಲಕನ ನಿಯಂತ್ರಣ ತಪ್ಪಿ ಪಲ್ಟಿಯಾಗಿದೆ. ಚನ್ನರಾಯಪಟ್ಟಣದಿಂದ ಬೆಂಗಳೂರು ಮಾರ್ಗವಾಗಿ ವ್ಯಾನ್ ಹೋಗುತ್ತಿತ್ತು. ಮಧ್ಯಾಹ್ನ ಜೋರು ಮಳೆ ಬಂದು ರಸ್ತೆಯ ಪಕ್ಕದಲ್ಲಿ ನಿಂತಿದ್ದ ನೀರಿನ ಮೇಲೆ ವ್ಯಾನ್ ಚಲಿಸಿದಾಗ, ಚಾಲಕನಿಗೆ ನಿಯಂತ್ರಣ ಸಿಗದೆ ರಸ್ತೆ ಪಕ್ಕದ ಡಿವೈಡರ್‌ಗೆ ಡಿಕ್ಕಿ ಹೊಡೆದಿದೆ. ಕಾರಿನಲ್ಲಿ ಮೂರು ಸಿಂಧಿ ಕರುಗಳನ್ನು ತುಂಬಲಾಗಿತ್ತು. ಸ್ಥಳಿಯರು ಕರುಗಳನ್ನು ರಕ್ಷಣೆ ಮಾಡಿದ್ದಾರೆ. ಚಾಲಕನಿಗೆ ಪೆಟ್ಟಾಗಿದ್ದು, ಆಸ್ಪತ್ರೆಗೆ ಸಾಗಿಸಲಾಗಿದೆ. ಪ್ರಕರಣ ದಾಖಲಿಸಿ ಕರುಗಳನ್ನು ಗೋ ಶಾಲೆಗೆ ಬಿಡಲಾಗುವುದು ಎಂದು ಎಸ್‌ಐ ರೂಪಾ ಬಿರಾದಾರ್ ತಿಳಿಸಿದರು.

# ಬೀದಿ ನಾಯಿಗಳ ದಾಳಿಗೆ ಬಾಲಕನಿಗೆ ಗಾಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಮನೆಗೆ ತೆರಳುತ್ತಿದ್ದ ಬಾಲಕನ ಮೇಲೆ ಬೀದಿ ನಾಯಿಗಳು ದಾಳಿ ನಡೆಸಿ ಗಂಭೀರ ಗಾಯಗೊಳಿಸಿರುವ ಘಟನೆ ಪಟ್ಟಣದ ಕುಡುಗರಹಳ್ಳಿ ಬಡಾವಣೆಯಲ್ಲಿ ನಡೆದಿದೆ.

ಶಾಹಿದ್ ಎಂಬ ಬಾಲಕನೇ ಬೀದಿ ನಾಯಿಗಳ ದಾಳಿಯಿಂದ ಗಾಯಗೊಂಡಿದ್ದು, ತಾಲ್ಲೂಕು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ. ಶಾಹಿದ್ ಮದರಸಾದಿಂದ ಮನೆಗೆ ತೆರಳುತ್ತಿದ್ದ ವೇಳೆ ಏಕಾಏಕಿ ಬೀದಿ ಶ್ವಾನಗಳು ಗುಂಪಾಗಿ ಬಂದು ದಾಳಿ ಮಾಡಿವೆ.

ಶ್ವಾನಗಳಿಂದ ಬಿಡಿಸಿಕೊಳ್ಳಲು ಬಾಲಕ ಹರಸಾಹಸ ಪಟ್ಟಿದ್ದಾನೆ. ಅಷ್ಟರಲ್ಲಿ ದೇಹದ ವಿವಿಧ ಭಾಗಗಳಿಗೆ ನಾಯಿಗಳು ರಕ್ತ ಬರುವಂತೆ ಕಚ್ಚಿ ಗಾಯಗೊಳಿಸಿವೆ.



ಬೀದಿ ನಾಯಿಗಳ ದಾಳಿಗೆ ಸಿಲುಕಿದ ಶಾಹಿದ್ ಅಳುತ್ತಾ ಕಿರುಚಾಡಲು ಆರಂಭಿಸಿದ್ದಾನೆ.

ಬಾಲಕನ ಕಿರುಚಾಟ ಕೇಳಿ ಓಡಿ ಬಂದ ಸ್ಥಳೀಯರು ಬೀದಿ ನಾಯಿಗಳಿಂದ ಬಚಾವ್ ಮಾಡಿದ್ದಾರೆ. ಇತ್ತೀಚೆಗೆ ಪಟ್ಟಣದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು, ಇದಕ್ಕೆ ಕಡಿವಾಣ ಹಾಕುವಂತೆ ನಗರವಾಸಿಗಳು ಹಲವು ಬಾರಿ ಪುರಸಭೆಗೆ ಮನವಿ ಸಲ್ಲಿಸಿದ್ದರೂ ಅಧಿಕಾರಿಗಳು ಕ್ಯಾರೆ ಎನ್ನದೆ ಬೇಜವಾಬ್ದಾರಿತನ ಪ್ರದರ್ಶಿಸಿದ್ದಾರೆ.

ಬೀದಿ ನಾಯಿಗಳ ಹಾವಳಿಗೆ ಕಡಿವಾಣ ಹಾಕದ ಪುರಸಭೆ ವಿರುದ್ಧ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.


ಬೀದಿನಾಯಿ ಹಾವಳಿ ತಪ್ಪಿಸಿ: ಇನ್ನೇನು ಬೇಸಿಗೆ ರಜೆ ಮುಗಿದು ಶಾಲಾ-ಕಾಲೇಜು ಆರಂಭ ಆಗುತ್ತಿವೆ. ನೂರಾರು ಮಕ್ಕಳು ನಿತ್ಯ ಕಲಿಯಲು ಹೋಗಿ ಬರುತ್ತಾರೆ.

ಹಾಗೆಯೇ ಸಾರ್ವಜನಿಕರೂ ವಿವಿಧ ಕೆಲಸ ಕಾರ್ಯಗಳಿಗೆ ಓಡಾಡುತ್ತಿರುತ್ತಾರೆ. ಬೀದಿ ನಾಯಿ ಹಾವಳಿಯಿಂದ ಎಲ್ಲರೂ ಭಯದಿಂದ ಓಡಾಡುವಂತಾಗಿದ್ದು, ಇನ್ನಾದರೂ ಪುರಸಭೆಯವರು ನಾಯಿ ಹಾವಳಿಗೆ ತಡೆ ಒಡ್ಡಬೇಕು ಎಂದು ನಾಗರಿಕರು ಆಗ್ರಹಿಸಿದ್ದಾರೆ.

# ರಾಜ್ಯ ಸರ್ಕಾರದ ಸಾಧನೆ ಶೂನ್ಯ: ನಾರಾಯಣಸ್ವಾಮಿ


ಬೇಲೂರು: ಅಧಿಕಾರಕ್ಕೆ ಬಂದಾಗಿನಿಂದಲೂ ಮುಖ್ಯಮಂತ್ರಿ ಸ್ಥಾನಕ್ಕಾಗಿ ಕಿತ್ತಾಟ, ಅವ್ಯಾಹತ ಭ್ರಷ್ಟಾಚಾರದಲ್ಲೇ ಸರ್ಕಾರ ಮುಳುಗಿದ್ದು ಎರಡು ವರ್ಷದ ಸಾಧನೆ ಶೂನ್ಯ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದರು.

ಶನಿವಾರ ಪಟ್ಟಣಕ್ಕೆ ಭೇಟಿ ನೀಡಿದ್ದ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಗ್ಯಾರಂಟಿ ಯೋಜನೆಗಳ ಹೆಸರಿನಲ್ಲೇ ಎರಡು ವರ್ಷ ಕಳೆಯಿತು ಹೊರತು ರಾಜ್ಯದಲ್ಲಿ ಹೇಳಿಕೊಳ್ಳುವಂತಹ ಯಾವ ಅಭಿವೃದ್ಧಿಯೂ ಆಗಿಲ್ಲ. ಭ್ರಷ್ಟಾಚಾರದ ಕೂಪವಾದ ರಾಜ್ಯ ಸರ್ಕಾರ ತನ್ನ ತಪ್ಪುಗಳನ್ನು ಮುಚ್ಚಿಕೊಳ್ಳಲು ಜಾತಿ ಗಣತಿ, ಒಳಮೀಸಲಾತಿ ವಿಷಯಗಳನ್ನು ಮುನ್ನಲೆಗೆ ತಂದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.



ರಾಜ್ಯ ಸರ್ಕಾರ ಹಾಲಿನಿಂದ ಆಲ್ಕೋಹಾಲ್ ವರೆಗೆ ಎಲ್ಲಾ ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿದೆ. ಮಹಿಳೆಯರಿಗೆ ಗೃಹಲಕ್ಷ್ಮಿ ಹೆಸರಿನಲ್ಲಿ ತಿಂಗಳಿಗೆ 2 ಸಾವಿರ ರೂ. ನೀಡಿ 20 ಸಾವಿರ ರೂ. ವಾಪಾಸ್ ಪಡೆಯುತ್ತಿದೆ. ಕಾಂಗ್ರೆಸ್‌ನವರ ಆಟ ರಾಜ್ಯದಲ್ಲಿ ಇನ್ಮುಂದೆ ನಡೆಯುದಿಲ್ಲ. ಜನರು ಬುದ್ಧಿವಂತರಾಗಿದ್ದಾರೆ. ವೇದಿಕೆಯಲ್ಲಿನ ಭಾಷಣಕ್ಕೆ ಮಾತ್ರ ಅಭಿವೃದ್ಧಿ ಸೀಮಿತವಾಗಿದೆ. ನಯಾಪೈಸೆ ಅಭಿವೃದ್ದಿಗೆ ಹಣ ನೀಡಿಲ್ಲ ಎಂದರು.

# ಧಾರ್ಮಿಕ ಕೇಂದ್ರಗಳಿಂದ ಸಂಸ್ಕೃತಿ ಉಳಿವು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ದೇಶದಲ್ಲಿ ಮಠ-ಮಾನ್ಯಗಳ ಪರಂಪರೆಯಿಂದ ಮಾತ್ರ ಹಿಂದು ಧರ್ಮ ಉಳಿಯಲು ಸಾಧ್ಯ ಎಂದು ಬಾಳೆಹೊನ್ನೂರು ಮಠದ ಶ್ರೀ ಪ್ರಸನ್ನ ರೇಣುಕಾ ಡಾ. ವೀರಸೋಮೇಶ್ವರ ರಾಜ ದೇಶಿಕೇಂದ್ರ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಅಣತಿ ಗ್ರಾಮದ ಶ್ರೀ ರುದ್ರೇಶ್ವರಸ್ವಾಮಿ ದೇಗುಲ ಉದ್ಘಾಟನೆ, ಶ್ರೀ ಭದ್ರಕಾಳಿ ದೇವಿ, ವಿಘ್ನೇಶ್ವರ, ಶ್ರೀ ಬಸವೇಶ್ವರಸ್ವಾಮಿ ನೂತನ ವಿಗ್ರಹ ಪ್ರತಿಷ್ಠಾಪನೆ ಗೋಪುರಕ್ಕೆ ಕಳಸಾರೋಣ, ಕುಂಭಾಭಿಷೇಕ, ಶಿವ ದೀಕ್ಷೆ ಹಾಗೂ ಧರ್ಮ ಜಾಗೃತಿ ಭಾವೈಕ್ಯತೆ ಧಾರ್ಮಿಕ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದರು.

ದೇವರ ಅನುಗ್ರಹವಿಲ್ಲದೆ ಏನು ನಡೆಯಲು ಸಾಧ್ಯವಿಲ್ಲ. ಬೇರೆಯವರು ಮಾಡುವ ಕೆಲಸದಲ್ಲಿ ತಪ್ಪು ಹುಡುಕುವ ಮೊದಲು ತನ್ನ ತಪ್ಪಿನ ಬಗ್ಗೆ ಚಿಂತಿಸಬೇಕು. ಆಗಮಾತ್ರ ಪರಿಪೂರ್ಣ ವ್ಯಕ್ತಿಯಾಗಿ ರೂಪುಗೊಳ್ಳಲು ಸಾಧ್ಯವಾಗುತ್ತದೆ ಎಂದರು.

ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ನಮ್ಮ ಧರ್ಮವನ್ನು ಗೌರವಿಸಿದರೆ ಮಾತ್ರ ಸಂಸ್ಕೃತಿ ಉಳಿಯಲು ಸಾಧ್ಯವಾಗುತ್ತದೆ. ತಾಲ್ಲೂಕಿನ ಅಭಿವೃದ್ಧಿ ಕೆಲಸಗಳಿಗೆ ತಾವು ಲೋಕಸಭಾ ಸದಸ್ಯರಾಗಿ ಹೆಚ್ಚಿನ ಸಹಕಾರ ನೀಡುತ್ತಾ ಬರುತ್ತಿದ್ದು ಹೋಬಳಿಯ ಕೆಂಕರೆ ಬಳಿಯಿಂದ ತಿಮ್ಲಾಪುರ ಸೇರಿದಂತೆ ಈ ಭಾಗದ ಕೆರೆಗಳಿಗೆ ನೀರಾವರಿಸುವ ಯೋಜನೆಗೆ ರಾಜ್ಯ ಸರ್ಕಾರ ಅನುಮೋದನೆ ನೀಡಿದೆ ಇದರಿಂದ ಈ ಭಾಗದ ರೈತರ ದಶಕದ ಕನಸು ನನಸಾಗಲಿದೆ. ರಾಜ್ಯ ಸರ್ಕಾರ ರಾಜ್ಯದ ಎಲ್ಲಾ ವರ್ಗದ ಜನರಿಗೂ ಸರ್ವರಿಗೂ ಸಮಪಾಲು ಎನ್ನುವ ರೀತಿಯಲ್ಲಿ ಕೆಲಸ ನಿರ್ವಹಿಸುತ್ತಿದೆ ಎಂದರು. ಶಾಸಕ ಸಿ.ಎನ್. ಬಾಲಕೃಷ್ಣ ಮಾತನಾಡಿ, ಬಾಳೆಹೊನ್ನೂರು ಮಠದ ಶ್ರೀಗಳ ಪಾದ ಸ್ಪರ್ಶದಿಂದ ಅಣತಿ ಗ್ರಾಮ ಪುನೀತವಾಗಿದೆ. ಗ್ರಾಮದಲ್ಲಿ ಶ್ರೀಗಳ ಅಡ್ಡಪಲ್ಲಕ್ಕಿ ಉತ್ಸವ ನಡೆದಿರುವುದರಿಂದ ಗ್ರಾಮಕ್ಕೆ ಇನ್ನಷ್ಟು ಒಳಿತಾಗಲಿದೆ. ಅಣತಿ ಗ್ರಾಮ ಇಡೀ ರಾಜ್ಯದಲ್ಲೇ ತನ್ನದೇ ಆದ ಇತಿಹಾಸ ಹೊಂದಿದೆ ಎಂದು ತಿಳಿಸಿದರು.

ತಿಪಟೂರು ತಾಲ್ಲೂಕು ಹೊನ್ನವಳ್ಳಿ ಗ್ರಾಮದ ಕರಿಸಿದ್ದೇಶ್ವರ ಮಠದ ಶ್ರೀ ಶಿವಪ್ರಕಾಶ್ ಸ್ವಾಮೀಜಿ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ನವಿಲೆ ಪರಮೇಶ್ ಹಾಗೂ ತಾಲ್ಲೂಕು ವೀರಶೈವ ಮಹಾಸಭಾ ಅಧ್ಯಕ್ಷ ಗಂಗೇಗೌಡ ಮಾತನಾಡಿದರು.

# ಉದ್ಯಮಿ ಸಂಪತ್ ಕೊಲೆ: ಇಬ್ಬರ ಬಂಧನ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ತಾಲ್ಲೂಕಿನ ಕಲ್ಲಹಳ್ಳಿ ಗ್ರಾಮ ಸಮೀಪ ಪತ್ತೆಯಾಗಿದ್ದ ವ್ಯಕ್ತಿ ಕೊಲೆ ಸಂಬಂಧ ಕೊಡಗು ಪೊಲೀಸರು ಇಬ್ಬರನ್ನು ಬಂಧಿಸಿದ್ದಾರೆ ಎಂದು ತಿಳಿದುಬಂದಿದೆ.

ಕೊಡಗಿನ ಗಣಪತಿ ಹಾಗೂ ಕಿರಣ್ ಬಂಧಿತರು. ದೃಶ್ಯಂ ಸಿನಿಮಾ ಶೈಲಿಯಲ್ಲಿ ವ್ಯಕ್ತಿಯನ್ನು ಕೊಂದು ಸಾಕ್ಷ್ಯ ನಾಶಕ್ಕೆ ಯತ್ನಿಸಿದ್ದ ಆರೋಪಿಗಳನ್ನು ಪೊಲೀಸರು ಬೆಳ್ತಂಗಡಿ ಸಮೀಪ ವಶಕ್ಕೆ ಪಡೆದಿದ್ದಾರೆ ಎಂದು ತಿಳಿದುಬಂದಿದೆ. ಪ್ರಕರಣ ನಡೆದ ಎಂಟು ದಿನಗಳ ಬಳಿಕ ಆರೋಪಿಗಳು ಬಲೆಗೆ ಬಿದ್ದಿದ್ದಾರೆ.

ಸೋಮವಾರಪೇಟೆ ತಾಲ್ಲೂಕು ಕಕ್ಕೆಹೊಳೆ ನಿವಾಸಿ ಸಂಪತ್ (30) ಎಂಬಾತನನ್ನು ಕೊಲೆಗೈದು ಕಾರಿನಲ್ಲಿ ಮೃತದೇಹ ತಂದಿದ್ದ ಆರೋಪಿಗಳು ಕಲ್ಲಹಳ್ಳಿಯ ಪ್ರಪಾತಕ್ಕೆ ಶವ ಎಸೆದು ಕಾರನ್ನು ರಸ್ತೆಪಕ್ಕ ನಿಲ್ಲಿಸಿ ಹೋಗಿದ್ದರು. ಎರಡು ದಿನಗಳ ಬಳಿಕ ಸಾರ್ವಜನಿಕರು ವಾಹನ ಪರಿಶೀಲಿಸಿದಾಗ ರಕ್ತದ ಕಲೆ ಗೋಚರವಾಗಿತ್ತು. ಸ್ಥಳಕ್ಕೆ ಭೇಟಿ ನೀಡಿದ್ದ ಯಸಳೂರು ಠಾಣೆ ಪೊಲೀಸರು ಕೊಡಗು ಪೊಲೀಸರ ನೆರವಿನಿಂದ ಪ್ರಕರಣ ಬೇಧಿಸಿದ್ದರು. ಅಕ್ರಮ ಸಂಬಂಧ ಹಿನ್ನಲೆಯಲ್ಲಿ ಸಂಪತ್‌ನ ಕೊಲೆಯಾಗಿದೆ ಎನ್ನಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248